ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–1

(ಆ) ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ, 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ. ಪ್ರಕಾಶ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ"

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2006ರ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ.ಪಿ. ಪ್ರಕಾಶ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–2

(ಇ) ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕ, 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ. ಪ್ರಕಾಶ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2006ರ ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ. ಪ್ರಕಾಶ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–3

ಅಧ್ಯಕ್ಷರು: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿಧೇಯಕವನ್ನು ತಾವು ತೆಗೆದುಕೊಳ್ಳೋಣವೆಂದು ಹೇಳಿದರೆ ತೆಗೆದುಕೊಳ್ಳೋಣ.

ಶ್ರೀ ಎಸ್.ಎಸ್. ಪಾಟೀಲ್: ದಯವಿಟ್ಟು ಅದರ ಬಗ್ಗೆ ಸ್ವಲ್ಪ ಹೇಳಿ, ಕೇಳಿ ಎಲ್ಲರೂ ತಿಳಿದುಕೊಳ್ಳಲಿ. ಎಲ್ಲರಿಗೂ ಅನುಭವವಾಗುತ್ತದೆ.

6. ಅಧ್ಯಕ್ಷರ ಅಪ್ಪಣೆ ಮೇರೆಗೆ

ವಿಷಯ:– ನಿರ್ವಹಣಾ ಮುಂಗಡ ಪತ್ರ ಒದಗಿಸುವ ಬಗ್ಗೆ (Performance Budget)

ಶ್ರೀ ಎಂ.ಪಿ. ಪ್ರಕಾಶ್ (ಗೃಹ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ಮಾನ್ಯ ಅಧ್ಯಕ್ಷರೆ, ಮಾನ್ಯ ಎಸ್.ಎಸ್. ಪಾಟೀಲ್‌ರವರು ಪರ್‌ಫಾರ್ಮೆನ್ಸ್ ಬಜೆಟ್‌ನ ಕಾಪಿಗಳನ್ನು ಕೆಲವು ಇಲಾಖೆಗಳವರು ಕೊಡಲಿಲ್ಲವೆಂದು ಹೇಳಿದ್ದಾರೆ. ಅದು ನಿಜ ಕೂಡ ಇದೆ. ಈ ತರಹ ಆಗದಂತೆ ನಾನು ಇಲಾಖೆಯವರ ಜೊತೆ ಪ್ರಸ್ತಾಪ ಮಾಡಿ ಎಲ್ಲರಿಗೂ ತಿಳಿಸಿದ್ದಾಗ್ಯೂ ಕೂಡ ಕೆಲವು ಇಲಾಖೆಗಳವರು ಕೊಡಲಿಲ್ಲ. ಅದು ಅಕ್ಷಮ್ಯ ಅಪರಾಧ. ಯಾವುದೋ ಕಾರಣಕ್ಕಾಗಿ ಇಲ್ಲಿ ನಾವು ನಮ್ಮ ಆಯವ್ಯಯವನ್ನು ಒಪ್ಪಿಕೊಂಡಿರಬಹುದು. ಆದರೆ ಒಂದು ಅರ್ಥಪೂರ್ಣವಾದಂಥ ಚರ್ಚೆ ಆಗಬೇಕಾಗಿದ್ದರೆ, ಅವುಗಳನ್ನು ಮಂಡಿಸಬೇಕಾಗಿತ್ತು ಅದರ ತಪ್ಪನ್ನು ಸರ್ಕಾರ